ರಾಮನಗರ–ಚನ್ನಪಟ್ಟಣ ತಾಲ್ಲೂಕುಗಳಲ್ಲಿರುವ ಏರಿಯಾ ಪ್ಲಾನಿಂಗ್ ಜೋನ್–1 (APZ-1) ಪ್ರದೇಶಕ್ಕೆ ಮಹಾಯೋಜನೆಯನ್ನು ತಯಾರಿಸದೆ ಇರುವ ಪ್ರಯುಕ್ತ ಸರ್ಕಾರದಿಂದ ಅನುಮೋದಿಸಲ್ಪಟ್ಟ ನಕ್ಷೆಯನ್ನು ಆಧರಿಸಿ ಈ ಪ್ರದೇಶದ ಅಭಿವೃದ್ಧಿಗಳಿಗೆ ಅನುಮತಿ ನೀಡಲಾಗುತ್ತಿತ್ತು, ಹೀಗಾಗಿ ಒಟ್ಟಾರೆ ಪ್ರದೇಶದಲ್ಲಿ ಕೈಗಾರಿಕೆ, ವಸತಿ, ವಾಣಿಜ್ಯ ಮತ್ತಿತರ ಬೆಳವಣಿಗೆಗಳು ಯಾವುದೇ ಯೋಜನಾ ನಿಯಂತ್ರಣವಿಲ್ಲದೆ ಜೊತೆ ಜೊತೆಯಲ್ಲಿ ಬರುತ್ತಿದ್ದು, ಹಲವು ಕೈಗಾರಿಕೆಗಳ ಚಟುವಟಿಕೆಯಿಂದಾಗಿ ವಾಯು ಮತ್ತು ಜಲ ಮಾಲೀನ್ಯಗೊಳ್ಳುತ್ತಿದ್ದು ಅಲ್ಲಿನ ನಿವಾಸಿಗಳ ಆರೋಗ್ಯದ ಮೇಲೆ ಗಂಭೀರ ಸ್ವರೂಪದ ಪರಿಣಾಮ ಉಂಟಾಗುತ್ತಿದ್ದುದನ್ನು ಗಮನಿಸಿ, ಈ ಪ್ರದೇಶಗಳ ಯೋಜನಾಬದ್ಧ ಬೆಳವಣಿಗೆಗೆ, ಸಾರ್ವಜನಿಕರ ಆರೋಗ್ಯ, ನೈರ್ಮಲ್ಯ, ಪರಿಸರ ಮಾಲಿನ್ಯ, ರಸ್ತೆಯ ಸಂಪರ್ಕ ಮುಂತಾದವುಗಳನ್ನು ಕಾಪಾಡುವ ದೃಷ್ಟಿಯಿಂದ ಆನೇಕಲ್, ಹೊಸಕೋಟೆ, ಕನಕಪುರ, ನೆಲಮಂಗಲ, ಮಾಗಡಿ ಹಾಗೂ ರಾಮನಗರ – ಚೆನ್ನಪಟ್ಟಣ ಸೇರಿದಂತೆ ಏರಿಯಾ ಪ್ಲಾನಿಂಗ್ ಜೋನ್ (APZ-1)ರ ಯೋಜನಾ ಪ್ರದೇಶಕ್ಕೆ ಮಧ್ಯಂತರ ಮಹಾ ಯೋಜನೆಯನ್ನು ತಯಾರಿಸಿದ್ದು, ಈ ಮಧ್ಯಂತರ ಮಹಾ ಯೋಜನೆಗೆ ಮಂಜೂರಾತಿ ನೀಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿ ಇದೆ

ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ನಿರ್ಮಾಣ ಕಾರ್ಯ ಸ್ಥಗಿತಗೊಂಡಿರುವುದಿಲ್ಲ

ಈ) ಸರ್ಕಾರದ ಪರಿಶೀಲನೆಯಲ್ಲಿದೆ

ಉ) ಮಧ್ಯಂತರ ಮಹಾಯೋಜನೆಗೆ ಸರ್ಕಾರದ ಮಂಜೂರಾತಿ ನೀಡಿದ ತಕ್ಷಣ ಭೂ ಪರಿವರ್ತನೆ ಮತ್ತು ನಕ್ಷೆ ಮಂಜೂರಾತಿಗೆ ಅನುಮೋದನೆ ನೀಡಲಾಗುವುದು

1508 (2078) ಶ್ರೀ ರಮೇಶ್ ಕುಮಾರ್ ಕೆ ಆರ್ (ಶ್ರೀನಿವಾಸಪುರ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀನಿವಾಸಪುರ ಪಟ್ಟಣಕ್ಕೆ ಒಂದು ಲಕ್ಷ ಅರವತ್ತು ಸಾವಿರ (160) ಯೂನಿಟ್‌ಗಳ ವಿದ್ಯುಚ್ಛಕ್ತಿ ಹಂಚಿಕೆ ಮಾಡಿರುವುದು ನಿಜವೇ,

ಆ) ಶ್ರೀನಿವಾಸಪುರ ಪಟ್ಟಣ ವ್ಯಾಪ್ತಿಯಲ್ಲಿ ವಿದ್ಯುಚ್ಛಕ್ತಿ ಸರಬರಾಜಿನಲ್ಲಿ ತೀವ್ರ ಅಡೆತಡೆಗಳು ಉಂಟಾಗಿ ಪಟ್ಟಣದ ಜನ ಕುಡಿಯುವ ನೀರಿಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ, ಕುಡಿಯುವ ನೀರಿನ ಸರಬರಾಜನ್ನು ಯಾವ ಅಡಚಣೆ ಇಲ್ಲದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಈ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಹಾಲಿ ಇರುವ ವಿತರಣಾ ಕೇಂದ್ರಗಳು ಎಷ್ಟು,

ಉ) ತಾಲ್ಲೂಕಿನ ರಾಯಲ್ಪಾಡು ಶ್ರೀನಿವಾಸಪುರ ಪಟ್ಟಣ ಮತ್ತು ಗೌನಿಪಲ್ಲಿ ಪ್ರದೇಶಗಳಲ್ಲಿ ವಿದ್ಯುಚ್ಛಕ್ತಿ ಸರಬರಾಜಿನಲ್ಲಿ ಅವ್ಯವಸ್ಥೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಊ) ಹಾಗಿದ್ದಲ್ಲಿ, ಈ ಪ್ರದೇಶಗಳಲ್ಲಿ ಹೊಸ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಶ್ರೀನಿವಾಸಪುರ ಪಟ್ಟಣದಲ್ಲಿರುವ ವಿದ್ಯುತ್ ವಿತರಣಾ ಕೇಂದ್ರಕ್ಕೆ ಪ್ರತಿ ದಿನ ಒಂದು ಲಕ್ಷ ಎಪ್ಪತ್ತು ಸಾವಿರ (1,70,000) ಯೂನಿಟ್‌ಗಳ ವಿದ್ಯುಚ್ಛಕ್ತಿಯನ್ನು ಹಂಚಿಕೆ ಮಾಡಲಾಗಿದೆ

ಆ ಮತ್ತು ಇ) ಶ್ರೀನಿವಾಸಪುರ ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಸ್ಥಾವರಗಳಿಗೆ ಶ್ರೀನಿವಾಸಪುರ ಪಟ್ಟಣ ಫೀಡರ್‌ನಿಂದಲೇ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಸದರೀ ಫೀಡರ್‌ನಲ್ಲಿ ತಾಂತ್ರಿಕ ತೊಂದರೆಗಳಿಂದ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾದಲ್ಲಿ ಆದ್ಯತೆ ಮೇರೆಗೆ ದುರಸ್ತಿ ಕಾರ್ಯಗಳನ್ನು ಕೈಗೊಂಡು ವಿದ್ಯುತ್ ಸರಬರಾಜನ್ನು ಪುನರ್‌ವ್ಯವಸ್ಥೆಗೊಳಿಸಿ, ಕುಡಿಯುವ ನೀರಿನ ಸರಬರಾಜಿಗೆ ತೊಂದರೆ ಆಗದಂತೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಅಲ್ಲದೇ, ಕುಡಿಯುವ ನೀರಿನ ಸ್ಥಾವರಗಳಿಗೆ ಪ್ರತ್ಯೇಕ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲಾಗುತ್ತಿದೆ

151

ಈ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಹಾಲಿ ಆರು ವಿದ್ಯುತ್ ವಿತರಣಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ

ಉ) ಶ್ರೀನಿವಾಸಪುರ ಪಟ್ಟಣದಲ್ಲಿ ಹಾಲಿ ಒಂದು ವಿದ್ಯುತ್ ವಿತರಣಾ ಕೇಂದ್ರವಿರುತ್ತದೆ ರಾಯಲ್ಪಾಡು ಮತ್ತು ಗೌನಪಲ್ಲಿ ಪ್ರದೇಶಗಳಲ್ಲಿ ಉಂಟಾಗಿರುವ ಕಡಿಮೆ ವೋಲ್ಟೇಜ್ ಪರಿಸ್ಥಿತಿ ಗಮನಕ್ಕೆ ಬಂದಿರುತ್ತದೆ

ಊ) ರಾಯಲ್ಪಾಡು ಮತ್ತು ಗೌನಿಪಲ್ಲಿ ಗಳಲ್ಲಿ ಹೊಸ ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಪ್ರಸ್ತಾವನೆಗಳನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ರೂಪಿಸುತ್ತಿದೆ

1509 (2079) ಶ್ರೀ ರಮೇಶ್ ಕುಮಾರ್ ಕೆ ಆರ್ (ಶ್ರೀನಿವಾಸಪುರ) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಒಂದು ವರ್ಷದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಎಷ್ಟು ಕಡೆ ಗ್ರಾಮ ವಾಸ್ತವ್ಯ ಮಾಡಿದ್ದರು ಹಾಗೂ ಈ ಕಾರ್ಯಕ್ರಮಕ್ಕಾಗಿ ಖರ್ಚಾದ ಒಟ್ಟು ಹಣ ಎಷ್ಟು,

ಆ) ಶ್ರೀ ಹಾರನಹಳ್ಳಿ ರಾಮಸ್ವಾಮಿಯವರ ನೇತೃತ್ವದ ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ಜಾರಿಗೆ ತಂದಿದೆಯೇ,

ಇ) ಹಾಗಿಲ್ಲದಿದ್ದಲ್ಲಿ ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಮಾನ್ಯ ಮುಖ್ಯಮಂತ್ರಿಗಳು ಗ್ರಾಮ ವಾಸ್ತವ್ಯ ಹೂಡಿದ ಬಗ್ಗೆ ಮಾಹಿತಿಯನ್ನು ಅನುಬಂಧದಲ್ಲಿ ಕೊಡಲಾಗಿದೆ ಗ್ರಾಮ ವಾಸ್ತವ್ಯ ಕಾರ್ಯಕ್ರಮ ಮುಖ್ಯಮಂತ್ರಿಯವರ ಸಾಮಾನ್ಯ ಪ್ರವಾಸ ಕಾರ್ಯಕ್ರಮದ ಒಂದು ಭಾಗವಾದ ಕಾರಣ ಈ ಬಾಬ್ತಿಗಾಗಿ ಯಾವುದೇ ಹೆಚ್ಚುವರಿ ವೆಚ್ಚ ಆಗುವುದಿಲ್ಲ